| | | | |
|---|---|---|---|
| 2 | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಉಪಯೋಗಕ್ಕೆ ಹೊಸ ವಾಹನ ಖರೀದಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆಡಳಿತ(1)- ವಾಹನ/ 2011-12 ದಿನಾಂಕ: 01-08-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಉಪಯೋಗಕ್ಕೆ ಒದಗಿಸಲಾಗಿರುವ ವಾಹನ ಸಂಖ್ಯೆ: ಕೆಎ -13 ಜಿ -1818 ಅಂಬಾಸಿಡರ್ ಕಾರು, ಗ್ರಾಮೀಣ ಪ್ರದೇಶ/ ಗುಡ್ಡಗಾಡು ರಸ್ತೆ/ ಮಲೆನಾಡು ಪ್ರದೇಶದ ರಸ್ತೆಗಳಲ್ಲಿ ಸಂಚರಿಸುವುದರಿಂದ, ತುಂಬಾ ಹಾಳಾಗಿರುವ ಕಾರಣ, ಪದೇ ಪದೇ ದುರಸ್ಥಿಗೆ ಬರುತ್ತಿದ್ದು, ದುರಸ್ಥಿಗಳನ್ನು ಮಾಡಿಸಿದರೂ ಸಹ ಸಮರ್ಪಕವಾಗಿ ದುರಸ್ಥಿಯಾಗದ ಕಾರಣ, ಜಿಲ್ಲಾ ಪಂಚಾಯಿತಿ ಅಭಿವೃದ್ಧಿ ಕಾರ್ಯಕ್ರಮಗಳ ಪರಿಶೀಲನೆಗೆ ಬಹಳ ತೊಂದರೆಯಾಗುತ್ತಿರುವುದರಿಂದ, ಹೊಸ ವಾಹನವನ್ನು ಒದಗಿಸುವಂತೆ ಮನವಿ ಮಾಡಿದ್ದು, ವಿಷಯವನ್ನು ಸಾಮಾನ್ಯ ಸಭೆಯ ನಿರ್ಣಯಕ್ಕೆ ಮಂಡಿಸಿದೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಉಪಯೋಗಕ್ಕೆ ಒದಗಿಸಲಾಗಿರುವ ವಾಹನ ತುಂಬಾ ಹಾಳಾಗಿದ್ದು, ಪದೇ ಪದೇ ದುರಸ್ಥಿಗೆ ಬರುತ್ತಿರುವ ಕಾರಣ ಜಿಲ್ಲಾ ಪಂಚಾಯಿತಿ ಅಭಿವೃದ್ಧಿ ಕಾರ್ಯಕ್ರಮಗಳ ಪರಿಶೀಲನೆಗೆ ಅನುಕೂಲವಾಗುವಂತೆ ಹೊಸ ವಾಹನವನ್ನು ಖರೀದಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು. |
| 3 | ಮಾಧ್ಯಮ ದಿನಾಚರಣೆಗೆ ಆರ್ಥಿಕ ಧನಸಹಾಯ ಕೋರಿ. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆ(80 ವಂತಿಗೆ 80/2011-12 ದಿನಾಂಕ: 25-07-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಅಧ್ಯಕ್ಷರು ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ(ರಿ), ಹಾಸನ ಇವರು ಜುಲೈ -31ರಂದು ಅರಕಲಗೂಡಿನಲ್ಲಿ ಜಿಲ್ಲಾ ಮಟ್ಟದ ಮಾಧ್ಯಮ ದಿನಾಚರಣೆ ಸಮಾರಂಭ ಏರ್ಪಡಿಸಿದ್ದು, ಪ್ರತಿ ವರ್ಷದಂತೆ, ಈ ವರ್ಷವೂ ಸಹ ಜಿಲ್ಲಾ ಪಂಚಾಯಿತಿ ವತಿಯಿಂದ ಧನ ಸಹಾಯ ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ಈ ವಿಷಯದ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಯಿತು.<br>ಅಧ್ಯಕ್ಷರು ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ(ರಿ), ಹಾಸನ ಇವರು ಕೋರಿರುವಂತೆ, ಜಿಲ್ಲಾ ಮಟ್ಟದ ಮಾಧ್ಯಮ ದಿನಾಚರಣೆಯನ್ನು ಆಚರಿಸಲು ಜಿಲ್ಲಾ ಪಂಚಾಯಿತಿಯಿಂದ ರೂ.10000/-(ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು. |
| | ಸಭೆಯಲ್ಲಿ ಇನ್ನಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನಲೆಯಲ್ಲಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

(ಬಿ.ಡಿ.ಚಂದ್ರೇಗೌಡ)

ಅಧ್ಯಕ್ಷರು,

ಜಿಲ್ಲಾ ಪಂಚಾಯಿತಿ, ಹಾಸನ.

ಸೂಚನೆಗಳಂತೆ ಸಂಪೂರ್ಣ ಸ್ವಚ್ಛತಾ ಆಂದೋಲನದಡಿ ಕೈಗೊಂಡಿರುವ ಶೌಚಾಲಯಗಳ ನಿರ್ಮಾಣ ಕಾಮಗಾರಿಗಳನ್ನು ( ಒಗ್ಗೂಡಿಕೆ) ಅಳವಡಿಸಿಕೊಳ್ಳಲು ಮತ್ತು ಕಳೆದ ವರ್ಷ ಕೈಗೊಂಡಿರುವಂತಹ ಭಾರತ್ ನಿರ್ಮಾಣ ರಾಜೀವ್ ಗಾಂಧಿ ಸೇವಾ ಕೇಂದ್ರ ಕಟ್ಟಡಗಳ ಮುಂದುವರೆದ ಕಾಮಗಾರಿಗಳು ಸೇರಿದಂತೆ, ಇತರೆ ಮುಂದುವರೆದ ಕಾಮಗಾರಿಗಳನ್ನು ಹಾಗೂ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ವಿವಿಧ ಇಲಾಖೆಗಳ ಒಗ್ಗೂಡಿಸುವಿಕೆ ಕಾರ್ಯಕ್ರಮಕ್ಕಾಗಿ ಬೇಕಾಗಬಹುದಾದ ಅನುದಾನ ಸೇರಿಸಿ ಒಟ್ಟು ರೂ.10734.077 ಲಕ್ಷಗಳಿಗೆ ಅನುಮೋದನೆ ನೀಡುವ ಬಗ್ಗೆ ವಿಷಯವನ್ನು ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯ ನಿರ್ಣಯಕ್ಕಾಗಿ ಈ ಕೆಳಕಂಡಂತೆ ಮಂಡಿಸಿದೆ.

ರೂ.ಲಕ್ಷಗಳಲ್ಲಿ

| ಕ್ರಸಂ | ತಾಲ್ಲೂಕಿನ ಹೆಸರು | ತಯಾರಿಸಲಾದ ಕ್ರಿಯಾ ಯೋಜನೆಯ ಮೊತ್ತ | | | |
|---|---|---|---|---|---|
| | | OB | ನಿಗದಿತ | ಹೆಚ್ಚುವರಿ | ಒಟ್ಟು |
| 1 | ಆಲೂರು | 37.94 | 313.341 | 94.002 | 445.283 |
| 2 | ಅರಕಲಗೂಡು | 198.227 | 764.357 | 229.307 | 1191.891 |
| 3 | ಅರಸೀಕೆರೆ | 118.179 | 1101.751 | 330.525 | 1550.455 |
| 4 | ಬೇಲೂರು | 196.044 | 794.347 | 238.304 | 1228.695 |
| 5 | ಚನ್ನರಾಯಪಟ್ಟಣ | 205.214 | 1366.131 | 409.839 | 1981.184 |
| 6 | ಹಾಸನ | 90.442 | 1159.921 | 347.976 | 1598.339 |
| 7 | ಹೊಳೆನರಸೀಪುರ | 102.580 | 620.996 | 186.299 | 909.875 |
| 8 | ಸಕಲೇಶಪುರ | 170.898 | 505.666 | 151.700 | 828.355 |
| 9 | ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಒಗ್ಗೂಡಿಸುವಿಕೆ (Convergence) ಮತ್ತು ಇತರೆ ಕಾರ್ಯಕ್ರಮಗಳಿಗಾಗಿ | 0 | 0 | 1000.00 | 1000.00 |
| | ಒಟ್ಟು | **1119.615** | **6626.51** | **2987.952** | **10734.077** |

ಮಾನ್ಯ ಅಧ್ಯಕ್ಷರು, ತಾಲ್ಲೂಕು ಪಂಚಾಯಿತಿ, ಅರಕಲಗೂಡು ಇವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹಮ್ಮಿಕೊಳ್ಳಲಾಗಿರುವ ಕಾಮಗಾರಿಗಳ ಬಗ್ಗೆ ತಾಲ್ಲೂಕು ಪಂಚಾಯಿತಿ ಸಭೆಯಲ್ಲಿ ವಿಸ್ತೃತವಾಗಿ ಚರ್ಚೆ ನಡೆಸಿರುವುದಿಲ್ಲ. ಆದ್ದರಿಂದ, ಕ್ರಿಯಾ ಯೋಜನೆಗೆ ತಮ್ಮ ಸಹಮತವಿರುವುದಿಲ್ಲವೆಂದು ತಿಳಿಸಿದರು.

ಉಳಿದ 7 ತಾಲ್ಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು 2011-12ನೇ ಸಾಲಿಗೆ ಸಿದ್ಧಪಡಿಸಿ ಸಲ್ಲಿಸಿರುವ ಕ್ರಿಯಾ ಯೋಜನೆ, ಸಂಪೂರ್ಣ ಸ್ವಚ್ಛತಾ ಆಂದೋಲನದಡಿ ಕೈಗೊಂಡಿರುವ ಶೌಚಾಲಯಗಳ ನಿರ್ಮಾಣ ಕಾಮಗಾರಿಗಳನ್ನು ( ಒಗ್ಗೂಡಿಕೆ) ಅಳವಡಿಸಿಕೊಳ್ಳಲು ಮತ್ತು ಕಳೆದ ವರ್ಷ ಕೈಗೊಂಡಿರುವಂತಹ ಭಾರತ್ ನಿರ್ಮಾಣ ರಾಜೀವ್ ಗಾಂಧಿ ಸೇವಾ ಕೇಂದ್ರ ಕಟ್ಟಡಗಳ ಮುಂದುವರೆದ ಕಾಮಗಾರಿಗಳು ಸೇರಿದಂತೆ, ಇತರೆ ಮುಂದುವರೆದ ಕಾಮಗಾರಿಗಳನ್ನು ಹಾಗೂ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ವಿವಿಧ ಇಲಾಖೆಗಳ ಒಗ್ಗೂಡಿಸುವಿಕೆ ಕಾರ್ಯಕ್ರಮಕ್ಕಾಗಿ ಬೇಕಾಗಬಹುದಾದ ಅನುದಾನ ಸೇರಿಸಿ ರೂ.9542.18 ಲಕ್ಷಗಳ ಕ್ರಿಯಾ ಯೋಜನೆಗೆ ಅನುಮೋದನೆಯನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು.

| | | | |
|---|---|---|---|
| | | ಅನುಷ್ಠಾನದಲ್ಲಿ ಬಾರೀ ಅವ್ಯವಹಾರ ನಡೆಯುತ್ತಿದ್ದು, ತನಿಖಾ ತಂಡವನ್ನು ರಚಿಸಿ ಎಲ್ಲಾ ಕೊಳವೆ ಬಾವಿಗಳನ್ನು ಪರಿಶೀಲನೆ ನಡೆಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. ಕೊಳವೆ ಬಾವಿ ಕೊರೆದ ನಂತರ ವಿದ್ಯುದ್ದೀಕರಣ ಸೌಲಭ್ಯವನ್ನು ಒದಗಿಸುವವರೆಗೆ ಪೈಪು ಮತ್ತು ಮೋಟಾರನ್ನು ಫಲಾನುಭವಿಗೆ ನೀಡುವುದು ಸೂಕ್ತವಲ್ಲವೆಂದು ಅಭಿಪ್ರಾಯಪಟ್ಟರು.<br>ಮುಂದುವರೆದು, ಹಾಸನ ಜಿಲ್ಲಾ ಕೇಂದ್ರದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಬಹಳ ಬೇಡಿಕೆಯಿರುವುದು ಕಂಡುಬರುತ್ತದೆ. ತಾಲ್ಲೂಕು ಮಟ್ಟದಲ್ಲಿ ವಿದ್ಯಾರ್ಥಿನಿಲಯಗಳಲ್ಲಿ ಸ್ಥಾನಗಳು ಖಾಲಿ ಉಳಿಯುತ್ತವೆ. ಆದ್ದರಿಂದ, ತಾಲ್ಲೂಕು ಕೇಂದ್ರಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಜಿಲ್ಲಾ ಕೇಂದ್ರಕ್ಕೆ ವರ್ಗಾವಣೆ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವಂತೆ ಕೋರಿದರು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಇಲಾಖೆ ಇವರು ಮಾತನಾಡುತ್ತಾ, ಕಳೆದ ಸಾಲಿನಲ್ಲಿ ತಾಲ್ಲೂಕು ಕೇಂದ್ರಗಳಲ್ಲಿ ಖಾಲಿ ಉಳಿದ ಸ್ಥಾನಗಳನ್ನು ಜಿಲ್ಲಾ ಕೇಂದ್ರಕ್ಕೆ ವರ್ಗಾವಣೆ ಮಾಡಿಕೊಂಡು ವಿದ್ಯಾರ್ಥಿನಿಲಯಗಳನ್ನು ನಡೆಸಲಾಗುತ್ತಿದೆ. ಆದರೆ, ಇದಕ್ಕೆ ಕೇಂದ್ರ ಕಛೇರಿಯಿಂದ ಅನುಮೋದನೆಯಾಗಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣರವರು ಮಾತನಾಡುತ್ತಾ, ಎನ್.ಗೊಲ್ಲರಹಟ್ಟಿಯ ಫಲಾನುಭವಿಗಳಿಗೆ ನೇರ ಸಾಲ ಯೋಜನೆಯಡಿ ಅನುದಾನ ಮಂಜೂರಾಗಿದ್ದು, ಫಲಾನುಭವಿಗಳಿಗೆ ಚೆಕ್ ವಿತರಣೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮುಂದುವರೆದು, ಜಾವಗಲ್ ಹೋಬಳಿಗೆ 750 ಮನೆಗಳು ಮಂಜೂರಾಗಿದ್ದು, ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು. | |
| 7 | **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರ ವಿಷಯಗಳು** | | |
| 1 | 2011-12ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ವಾರ್ಷಿಕ ಕ್ರಿಯಾ ಯೋಜನೆ ಅನುಮೋದನೆ ಕುರಿತು. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಭಿ(3)ಉಖಾಯೋ/2010-11 ದಿನಾಂಕ: 25-07-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>2011-12ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ವಾರ್ಷಿಕ ಕ್ರಿಯಾ ಯೋಜನೆಗಳನ್ನು ಗ್ರಾಮ ಪಂಚಾಯಿತಿ/ ತಾಲ್ಲೂಕು ಪಂಚಾಯಿತಿಗಳಿಂದ ಅನುಮೋದನೆ ಪಡೆದು ಜಿಲ್ಲಾ ಪಂಚಾಯಿತಿಯ ಅನುಮೋದನೆ ಕೋರಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಿಯಾ ಯೋಜನೆಗಳನ್ನು ಸಲ್ಲಿಸಿರುತ್ತಾರೆ. ಈ ಕ್ರಿಯಾ ಯೋಜನೆಗಳನ್ನು ಪರಿಶೀಲಿಸಿ ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆ ನೀಡಬೇಕಾಗಿರುತ್ತದೆ. ಇದರಿಂದ, ಜಿಲ್ಲೆಗೆ ನಿಗದಿಯಾಗಿರುವ ಕಾರ್ಮಿಕ ಆಯವ್ಯಯದ ಮೊತ್ತ ರೂ.6626.51 ಲಕ್ಷ ಸೇರಿದಂತೆ, ಸರ್ಕಾರದಿಂದ ಇತ್ತೀಚೆಗೆ ಬಂದಂತಹ | ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಯಿತು.<br>ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅರಕಲಗೂಡು ತಾಲ್ಲೂಕಿನ ಕ್ರಿಯಾ ಯೋಜನೆಯನ್ನು ಹೊರತುಪಡಿಸಿ |

| | | | |
|---|---|---|---|
| | | ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ಬಿತ್ತನೆ ಬೀಜಕ್ಕೆ ಸಂಬಂಧಿಸಿದಂತೆ, ರಾಜ್ಯ ಸರ್ಕಾರದಿಂದ ಕನಿಷ್ಟ ದರ ಸೂಚಿಸಿರುವ ಸಂಸ್ಥೆಯ ಬಿತ್ತನೆ ಬೀಜಕ್ಕೆ ಶೇ.50ರಷ್ಟು ರಿಯಾಯಿತಿಯನ್ನು ನೀಡಿರುತ್ತದೆ. ಆದರೆ, ಹಾಸನ ಜಿಲ್ಲೆಯ ಹವಾಗುಣಕ್ಕೆ ವರದಾ ಸೂರ್ಯಕಾಂತಿ ಬೀಜವು ಸೂಕ್ತವಾಗಿರುತ್ತದೆ. ಆದರೆ, ವರದಾ ಸೂರ್ಯಕಾಂತಿ ಬೀಜಕ್ಕೆ ರೂ.800/-ಗಳ ದರವಿದ್ದು, ಸರ್ಕಾರದಿಂದ ಕೇವಲ ರೂ.90/-ಗಳ ಸಹಾಯಧನವನ್ನು ನೀಡಲಾಗುತ್ತಿದೆ. ಇದರಿಂದ, ರೈತರಿಗೆ ಯಾವುದೇ ಅನುಕೂಲವಾಗುತ್ತಿಲ್ಲ. ಆದ್ದರಿಂದ, ಸರ್ಕಾರಕ್ಕೆ ಹಾಸನ ಜಿಲ್ಲೆಯ ಹವಾಗುಣಕ್ಕೆ ಹೊಂದಿಕೊಳ್ಳುವ ಬಿತ್ತನೆ ಬೀಜಗಳಿಗೆ ಶೇ.50ರಷ್ಟು ರಿಯಾಯಿತಿಯನ್ನು ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು. ಅದರಂತೆ, ಟ್ರ್ಯಾಕ್ಟರ್ ಖರೀದಿಗೂ ಸಹ ರೂ.50000/-ಗಳ ಸಹಾಯಧನವನ್ನು ನೀಡಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ನೀಡುತ್ತಿಲ್ಲ. ಈ ಬಗ್ಗೆಯೂ ಸಹ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು. | |
| 6 | ದಿನಾಂಕ: 13-06-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ: 13-06-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಎಂ.ಕೆ.ದ್ಯಾವಯ್ಯರವರು ಸಭೆಗೆ ಮಂಡಿಸಿದರು ಮತ್ತು ಮಾನ್ಯ ಸದಸ್ಯರಾದ ಶ್ರೀಮತಿ ಎಸ್.ಎಲ್.ನಾಗಮಣಿ ರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣೀರವರು ಮಾತನಾಡುತ್ತಾ, ದೇವರಾಜ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಅನುಷ್ಠಾನ ಮಾಡುವ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆಯುವ ಏಜನ್ಸಿಯವರು ಹೊಳೆನರಸೀಪುರ ತಾಲ್ಲೂಕಿನಲ್ಲಿ ಒಬ್ಬ ಫಲಾನುಭವಿಯ ಜಮೀನಿನಲ್ಲಿ 350 ಅಡಿ ಕೊರೆದು 650 ಅಡಿ ಕೊರೆದಿರುವುದಾಗಿ ಫಲಾನುಭವಿಯಿಂದ ಸಹಿಯನ್ನು ಪಡೆದಿರುತ್ತಾರೆ. ಅಲ್ಲದೆ, 36 ಅಡಿ ಕೇಸಿಂಗ್ ಪೈಪನ್ನು ಮಾತ್ರ ಹಾಕಿರುತ್ತಾರೆ. ಈ ಬಗ್ಗೆ ಪರಿಶೀಲನೆ ನಡೆಸುವಂತೆ ಜಿಲ್ಲಾ ಅಧಿಕಾರಿ, ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮರವರಿಗೆ ಕೋರಿದ್ದು, ಇಲ್ಲಿಯವರೆಗೆ ಯಾವುದೇ ಕ್ರಮ ವಹಿಸಿರುವುದಿಲ್ಲ. ಆದ್ದರಿಂದ, ಈ ಪ್ರಕರಣದ ಬಗ್ಗೆ ತನಿಖೆ ನಡೆಸಿ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ನೇರ ಸಾಲ ಯೋಜನೆಯಡಿಯಲ್ಲಿ ಒಂದು ಗ್ರಾಮದಲ್ಲಿ ಫಲಾನುಭವಿಗಳು ಸಾಲ ತೆಗೆದುಕೊಂಡು ಸಾಲವನ್ನು ಹಿಂದಿರುಗಿಸಿಲ್ಲವೆಂದು ಬೇರೆ ಫಲಾನುಭವಿಗಳಿಗೆ ಸಾಲವನ್ನು ನೀಡುವುದಿಲ್ಲವೆಂದು ಸಾಲದ ಅರ್ಜಿಯನ್ನು ನೀಡಿರುವುದಿಲ್ಲ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರು ಮಾತನಾಡುತ್ತಾ, ಗಂಗಾ ಕಲ್ಯಾಣ ಯೋಜನೆಯ | ಸಭೆಯಲ್ಲಿ ಚರ್ಚಿಸಿದಂತೆ, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಪ್ರಸ್ತಾಪಿಸಿರುವ ವಿಷಯಗಳಿಗೆ ಸಂಬಂಧಿಸಿದಂತೆ, ಇಲಾಖಾಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಲಾಯಿತು<br>ಹಾಗೂ ದಿನಾಂಕ: 13-06-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮತ್ತು ಕ್ರಿಯಾ ಯೋಜನೆಗೆ ಸರ್ವಾನುಮತದಿಂದ ಅನುಮೋದಿಸಲಾಯಿತು. |

ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಅಂಗಮಾರಿ ರೋಗದಿಂದ ಆಲೂಗೆಡ್ಡೆ ಬೆಳೆಯು ಸಂಪೂರ್ಣವಾಗಿ ನಾಶವಾಗಿದ್ದು, ರೈತರಿಗೆ ಪರಿಹಾರವನ್ನು ನೀಡುವ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಶಾಸಕರಾದ ಶ್ರೀ ಹೆಚ್.ಕೆ.ಕುಮಾರಸ್ವಾಮಿರವರು ಮಾತನಾಡುತ್ತಾ, ಎಷ್ಟು ಹೆಕ್ಟೇರಿಗೆ ಆಲೂಗೆಡ್ಡೆಯನ್ನು ಬಿತ್ತನೆ ಮಾಡಲಾಗಿತ್ತು, ಈಗ ಎಷ್ಟು ಹೆಕ್ಟೇರಿನಲ್ಲಿ ಬೆಳೆಯು ನಾಶವಾಗಿದೆ ಎಂಬ ಬಗ್ಗೆ ಅಂದಾಜನ್ನು ಮಾಡಿ ಪರಿಹಾರವನ್ನು ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಪಶುಸಂಗೋಪನೆ ಇಲಾಖೆಯ 6-7 ಕಟ್ಟಡಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಪಶುಸಂಗೋಪನೆ ಇಲಾಖೆಯ ವಶಕ್ಕೆ ನೀಡಿರುವುದಿಲ್ಲ. ಕಟ್ಟಡಗಳನ್ನು ಇಲಾಖೆಯ ವಶಕ್ಕೆ ನೀಡಲು ಹೆಚ್ಚುವರಿ ಅನುದಾನವನ್ನು ನೀಡಬೇಕೆಂದು ಕೋರಿರುತ್ತಾರೆ. ಅಲ್ಲದೆ, ಈ ಬಗ್ಗೆ ಸಮರ್ಪಕ ಮಾಹಿತಿಯನ್ನು ನೀಡಲು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರುಗಳು ಯಾವುದೇ ಕ್ರಮ ವಹಿಸಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು.

ಉಪ ನಿರ್ದೇಶಕರು, ಪಶುಸಂಗೋಪನೆ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಆರ್.ಐ.ಡಿ.ಎಫ್-11 ರಲ್ಲಿ ಮಂಜೂರಾಗಿದ್ದ ಎಲ್ಲಾ ಕಟ್ಟಡಗಳನ್ನು ಇಲಾಖೆಯ ವಶಕ್ಕೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದವರು ನೀಡಿರುತ್ತಾರೆ. ಆದರೆ, ಆರ್.ಐ.ಡಿ.ಎಫ್ -12 ರಡಿಯಲ್ಲಿ ಹಾನುಬಾಳು, ನೆಲಗಳಲೆ, ಹೆತ್ತೂರು, ಮುಗಳೂರು ಗ್ರಾಮಗಳ ಪಶುಚಿಕಿತ್ಸಾ ಕೇಂದ್ರಗಳ ಕಟ್ಟಡಗಳನ್ನು ಇನ್ನೂ ಇಲಾಖೆಯ ವಶಕ್ಕೆ ನೀಡಿರುವುದಿಲ್ಲವೆಂದು ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಹಾಸನ ನಗರದಲ್ಲಿ ಮೀನುಗಾರಿಕೆ ಇಲಾಖೆಯ ಹಿರಿಯ ಸಹಾಯಕ ಮೀನುಗಾರಿಕಾ ನಿರ್ದೇಶಕರ ಕಛೇರಿ ಕಟ್ಟಡವನ್ನು ನಿರ್ಮಿಸಿದ್ದು, ಸದರಿ ಕಟ್ಟಡಕ್ಕೆ ಹೋಗುವ ರಸ್ತೆಯಲ್ಲಿ ಕೆಲವರು ಗೂಡಂಗಡಿಗಳನ್ನು ಇಟ್ಟುಕೊಂಡಿದ್ದು, ಕಛೇರಿಗೆ ಹೋಗಲು ಸಾಧ್ಯವಿರುವುದಿಲ್ಲ. ಆದ್ದರಿಂದ, ಮೀನುಗಾರಿಕೆ ಇಲಾಖೆಯ ಕಛೇರಿಗೆ ಹೋಗಲು ಅಗತ್ಯ ರಸ್ತೆಯನ್ನು ಬಿಡಿಸಿಕೊಡುವ ಬಗ್ಗೆ ನಗರಸಭೆಯವರಿಗೆ ಪತ್ರ ಬರೆದು, ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಗೊರೂರಿನಲ್ಲಿ ಮೀನುಗಾರಿಕೆ ಇಲಾಖೆಯವತಿಯಿಂದ ಮೀನುಮರಿ ಸಾಕಾಣಿಕೆ ತೊಟ್ಟಿಗಳನ್ನು ನಿರ್ಮಿಸಿದ್ದು, ಅಲ್ಲಿಗೆ ನೀರಿನ ವ್ಯವಸ್ಥೆ ಇರುವುದಿಲ್ಲ. ಆದ್ದರಿಂದ, ಮೀನುಮರಿಗಳನ್ನು ಸಾಕಲು ಅನುಕೂಲವಾಗುವಂತೆ ನೀರಿನ ಸೌಲಭ್ಯವನ್ನು ಒದಗಿಸುವಂತೆ ಮುಖ್ಯ ಇಂಜಿನಿಯರ್, ಹೇಮಾವತಿ ಜಲಾಶಯ, ಗೊರೂರು ಇವರಿಗೆ ತಿಳಿಸಲು ಕ್ರಮ ವಹಿಸಬೇಕೆಂದು ಕೋರಿದರು.

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ತೋಟಗಾರಿಕೆ ಇಲಾಖೆಯ ವತಿಯಿಂದ ರೈತರಿಗೆ ರಿಯಾಯಿತಿ ದರದಲ್ಲಿ ವಿವಿಧ ಸಸಿಗಳನ್ನು ವಿತರಿಸುತ್ತಿದ್ದು, ಸಾರ್ವಜನಿಕರಿಗೆ ಯಾವುದೇ ಮಾಹಿತಿ ಇರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಸಾಮಾಜಿಕ ಅರಣ್ಯ ವಿಭಾಗದ ವತಿಯಿಂದ ಬೆಳೆಸುವ ವಿವಿಧ ಸಸಿಗಳಿಗೆ ಹೆಚ್ಚಿನ ಅನುದಾನವನ್ನು ವಿನಿಯೋಗ ಮಾಡಲಾಗುತ್ತಿದೆ ಮತ್ತು ಸಸಿಗಳನ್ನು ರೈತರು ಬೆಳೆಸಿರುತ್ತಾರೆಯೇ ಎಂಬ ಬಗ್ಗೆ ಪರಿಶೀಲನೆ ನಡೆಸಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ಸಾಮಾಜಿಕ ಅರಣ್ಯ ವಿಭಾಗದ ಅಧಿಕಾರಿಗಳು ರೈತರು ನೆಟ್ಟುಕೊಂಡಿರುವ ಸಸಿಗಳು ಉಳಿದಿರುವ ಬಗ್ಗೆ ಪರಿಶೀಲನೆ ನಡೆಸಿ ದೃಡೀಕರಿಸಿದ ನಂತರ ಎಂ.ಬಿಯನ್ನು ಬರೆದುಕೊಟ್ಟಲ್ಲಿ ರೈತರು ಆಸಕ್ತಿಯಿಂದ ಸಸಿಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡುತ್ತಾರೆ ಇಲ್ಲವಾದಲ್ಲಿ ನಿರ್ಹಹಣೆ ಮಾಡುವುದಿಲ್ಲ. ಆದ್ದರಿಂದ, ಸಸಿಗಳನ್ನು ನೀಡುವಾಗ, ಹೆಚ್ಚಿನ ಆಸಕ್ತಿಯಿರುವ ನೀರಾವರಿ ಸೌಲಭ್ಯ ಮತ್ತು ತಂತಿಬೇಲಿ ಸೌಲಭ್ಯ ಹೊಂದಿರುವಂತಹ ರೈತರಿಗೆ ನೀಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ವಿತರಿಸುವ ಸಸಿಗಳನ್ನು ಬೆಳೆಸಿದವರಿಗೆ ಮಾತ್ರ ನಿರ್ವಹಣಾ ವೆಚ್ಚವನ್ನು ನೀಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಸಾಮಾಜಿಕ ಅರಣ್ಯ ವಿಭಾಗದ ವತಿಯಿಂದ ಸಿಲ್ವರ್ ಸಸಿಗಳನ್ನು ರೈತರಿಗೆ ಬೆಳೆಯಲು ನೀಡುತ್ತಿದ್ದು, ಕಾಫಿ ತೋಟವನ್ನು ಮಾಡುವ ರೈತರಿಗೆ ನೀಡಲು ಅವಕಾಶವಿರುವುದಿಲ್ಲವೆಂದು ತಿಳಿಸಿರುತ್ತಾರೆ. ಕಾಫಿಗಿಡ ನೆಡುವಾಗಲೇ ಸಿಲ್ವರ್ ಸಸಿಗಳನ್ನು ನೆಟ್ಟಲ್ಲಿ ಕಾಫಿಗಿಡ ಮತ್ತು ಸಿಲ್ವರ್ ಎರಡೂ ಸಸಿಗಳು ಚೆನ್ನಾಗಿ ಬೆಳೆಯುತ್ತವೆ. ಆದ್ದರಿಂದ, ಕಾಫಿತೋಟ ಮಾಡುವ ರೈತರಿಗೂ ಸಿಲ್ವರ್ ಸಸಿಗಳನ್ನು ನೀಡಲು ಉಪ ಅರಣ್ಯ ಸಂರಕ್ಷಣಾಧಿಕಾರಿಯವರಿಗೆ ನಿರ್ದೇಶನ ನೀಡಬೇಕೆಂದು ಕೋರಿದರು.<br>ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಉತ್ತರಿಸುತ್ತಾ, ಕೃಷಿ ಅರಣ್ಯ ಯೋಜನೆಯಡಿ ಸಿಲ್ವರ್ ಸಸಿಗಳನ್ನು ಕಾಫಿಬೆಳೆಯುವವರನ್ನು ಹೊರತುಪಡಿಸಿ ಬೇರೆಯವರಿಗೆ ನೀಡಿ ಅರಣ್ಯೀಕರಣವನ್ನು ಅಭಿವೃದ್ಧಿ ಪಡಿಸಲು ತಿಳಿಸಿರುವುದರಿಂದ, ಕಾಫಿ ಬೆಳೆಗಾರರಿಗೆ ಸಿಲ್ವರ್ ಸಸಿಗಳನ್ನು ವಿತರಣೆ ಮಾಡುತ್ತಿಲ್ಲವೆಂದು ಸಭೆಗೆ ವಿವರ ನೀಡಿದರು.<br>ಸಭೆಯಲ್ಲಿ ಸಾಮಾಜಿಕ ಅರಣ್ಯ ವಿಭಾಗದ ವತಿಯಿಂದ ಅನುಷ್ಠಾನ ಮಾಡುತ್ತಿರುವ ಕೃಷಿ ಅರಣ್ಯೀಕರಣ ಯೋಜನೆಯಡಿಯಲ್ಲಿ ಕಾಫಿ ಬೆಳೆಯುವವರಿಗೂ ಸಿಲ್ವರ್ ಸಸಿಗಳನ್ನು ನೀಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. | ಸಂಬಂಧಿಸಿದಂತೆ, ಪ್ರತಿ ಟ್ರ್ಯಾಕ್ಟರಿಗೆ ರೂ. 50000/-ಗಳ ಸಹಾಯಧನವನ್ನು ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಿತು.<br>ಹಾಗೂ ದಿನಾಂಕ: 10-06-2011ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮತ್ತು 2011-12ನೇ ಸಾಲಿನ ಕ್ರಿಯಾ ಯೋಜನೆಗೆ ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಲಾಯಿತು. |

| | | | |
|---|---|---|---|
| | | ಉಪ ನಿರ್ದೇಶಕರು, ಕರ್ನಾಟಕ ಮೂಲ ಸೌಕರ್ಯಗಳ ಅಭಿವೃದ್ಧಿ ನಿಗಮ, ಹಾಸನ ಇವರು ಉತ್ತರಿಸುತ್ತಾ, ಸುವರ್ಣ ಗ್ರಾಮೋದಯ ಯೋಜನೆಯಡಿ ಹೆಚ್ಚಿನ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಪ್ರೌಢಶಾಲಾ ಕಟ್ಟಡಗಳಲ್ಲಿ 3 ಕಟ್ಟಡಗಳು ಬಾಕಿಯಿರುವುದಾಗಿ ಸಭೆಗೆ ವಿವರ ನೀಡಿದರು. | |
| 5 | ದಿನಾಂಕ: 10-06-2011ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ: 10-06-2011ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಹುಚ್ಚೇಗೌಡರವರು ಸಭೆಗೆ ಮಂಡಿಸಿದರು ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ತೋಟಗಾರಿಕೆ ಇಲಾಖೆಯಲ್ಲಿ ಪ್ರಚಾರ ಮತ್ತು ಸಾಹಿತ್ಯ ಯೋಜನೆಗೆ ರೂ.5.00ಲಕ್ಷಗಳನ್ನು ನಿಗದಿಪಡಿಸಲಾಗಿದೆ. ಈ ಅನುದಾನದಲ್ಲಿ ಏನು ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಮಾತನಾಡುತ್ತಾ, ತೋಟಗಾರಿಕೆ ಇಲಾಖೆಯ ಯೋಜನೆಗಳ ವಿವರಗಳನ್ನು ನೀಡುವಂತೆ ತಿಳಿಸಲಾಗಿದ್ದರೂ ಸಹ ಯಾವುದೇ ಕ್ರಮ ವಹಿಸದೇ ಇರುವ ಬಗ್ಗೆ ಅಸಮಾಧಾನವನ್ನು ವ್ಯಕ್ತಪಡಿಸಿದರು.<br>ಮಾನ್ಯ ಸದಸ್ಯರಾಧ ಶ್ರೀಮತಿ ಜ್ಯೋತಿಗುರುದೇವ್ ರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಇಲಾಖೆಗಳಲ್ಲಿ ಅನುಷ್ಠಾನ ಮಾಡುವ ಯೋಜನೆಗಳ ವಿವರಗಳನ್ನು ಜಿಲ್ಲಾ ಪಂಚಾಯಿತಿ ಸದಸ್ಯರಿಗೆ ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆರವರು ಉತ್ತರಿಸುತ್ತಾ, ಪ್ರಚಾರ ಮತ್ತು ಸಾಹಿತ್ಯ ಯೋಜನೆಯಡಿಯಲ್ಲಿ ತಾಲ್ಲೂಕುವಾರು ಅನುದಾನವನ್ನು ಹಂಚಿಕೆ ಮಾಡಲಾಗಿದ್ದು, ಸದರಿ ಅನುದಾನದಲ್ಲಿ ಆಲೂಗೆಡ್ಡೆ ಬೆಳೆಗೆ ತಗಲುವ ಅಂಗಮಾರಿ ರೋಗವನ್ನು ತಡೆಗಟ್ಟುವ ಬಗ್ಗೆ ಪ್ರಚಾರ ಮಾಡಲು ವಿನಿಯೋಗಿಸಲು, ರೇಡಿಯೋ ಪ್ರಚಾರಕ್ಕಾಗಿ ವಿನಿಯೋಗಿಸಲಾಗುವುದು ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣಿ ರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ 3-4 ಇಲಾಖೆಗಳ ಬಗ್ಗೆ ಮಾತ್ರ ಮಾಹಿತಿ ನೀಡಿದ್ದು, ಇನ್ನಿತರೆ ಇಲಾಖೆಗಳ ಯೋಜನೆಗಳ ಬಗ್ಗೆ ಪೂರ್ಣ ಮಾಹಿತಿ ನೀಡಿರುವುದಿಲ್ಲ. ಆದ್ದರಿಂದ, ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡು ಎಲ್ಲಾ ಇಲಾಖೆಗಳ ಯೋಜನೆಗಳ ಮಾಹಿತಿಯನ್ನು ನೀಡಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಪ್ರಸ್ತಾಪಿಸಿದ ವಿಷಯಗಳಿಗೆ ಸಂಬಂಧಿಸಿದಂತೆ, ಇಲಾಖಾಧಿಕಾರಿಗಳು ಅಗತ್ಯ ಕ್ರಮ ವಹಿಸುವಂತೆ ತಿಳಿಸಲಾಯಿತು.<br>ಹಾಸನ ನಗರದಲ್ಲಿ ನಿರ್ಮಿಸಿರುವ ಮೀನುಗಾರಿಕಾ ಇಲಾಖೆಯ ಜಿಲ್ಲಾ ಕಛೇರಿಗೆ ಹೋಗಲು ಅಡ್ಡಲಾಗಿ ಹಾಕಿಕೊಂಡಿರುವ ಗೂಡಂಗಡಿಗಳನ್ನು ತೆಗೆದು ಅಗತ್ಯ ರಸ್ತೆಯನ್ನು ಬಿಟ್ಟು ಕೊಡುವಂತೆ ಆಯುಕ್ತರು, ನಗರಸಭೆ, ಹಾಸನ ಇವರಿಗೆ ಪತ್ರ ಬರೆಯಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಿತು.<br>ಹಾಸನ ಜಿಲ್ಲೆಯಲ್ಲಿ ಬೆಳೆಗಳ ಬಿತ್ತನೆ ಬೀಜಗಳಿಗೆ ಸಂಬಂಧಿಸಿದಂತೆ, ರೈತರು ಯಾವ ಸಂಸ್ಥೆಯಿಂದ ಬಿತ್ತನೆ ಬೀಜಗಳನ್ನು ಖರೀದಿಸುತ್ತಾರೋ ಅಂತಹ ಸಂಸ್ಥೆಯ ಬಿತ್ತನೆ ಬೀಜಗಳಿಗೆ ಶೇ.50ರಷ್ಟು ರಿಯಾಯಿತಿಯನ್ನು ನೀಡುವಂತೆ ಕೋರಿ ಮತ್ತು ಟ್ರ್ಯಾಕ್ಟರ್ ಖರೀದಿಗೆ |

| | | | |
|---|---|---|---|
| | | ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಕಾಮಗಾರಿಗಳ ಪಟ್ಟಿಯನ್ನು ನೀಡಿದಲ್ಲಿ ಪರಿಶೀಲನೆ ನಡೆಸಿ ಕ್ರಮ ವಹಿಸಲಾಗುವುದೆಂದು ತಿಳಿಸಿದರು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ಕಳೆದ ಸಾಲಿನಲ್ಲಿ ಸರ್ಕಾರದಿಂದ ಮಾರ್ಚ್ ತಿಂಗಳಿನಲ್ಲಿ 3054 ರಸ್ತೆ ಅಭಿವೃದ್ಧಿ ಯೋಜನೆಗೆ ವಿಶೇಷ ಅನುದಾನವನ್ನು ಬಿಡುಗಡೆ ಮಾಡಿದ್ದು, ಟೆಂಡರ್ ಕರೆದು ಅನುದಾನವನ್ನು ವಿನಿಯೋಗಿಸಲು ಸಾಧ್ಯವಾಗಿರುವುದಿಲ್ಲ. ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮುಖ್ಯ ಯೋಜನಾಧಿಕಾರಿಯವರು ಉತ್ತರಿಸುತ್ತಾ, ವಿಶೇಷ ಅಭಿವೃದ್ಧಿ ಯೋಜನೆಯಡಿ 3054 ರಸ್ತೆ ಅಭಿವೃದ್ಧಿಗೆ ರೂ.285.00ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ಅದರಲ್ಲಿ ರೂ.25.00ಲಕ್ಷಗಳನ್ನು ಮಾತ್ರ ವಿನಿಯೋಗಿಸಲಾಗಿತ್ತು. ಇನ್ನೂ ರೂ.260.00ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿದ್ದು, ಈಗ ರೂ.125.00ಲಕ್ಷಗಳನ್ನು ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಬಿಡುಗಡೆ ಮಾಡಲಾಗಿರುತ್ತದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಪ್ಯಾಕೇಜ್ ಅಡಿಯಲ್ಲಿ ಟೆಂಡರ್ ಕರೆದು ಅನುಷ್ಠಾನ ಮಾಡುವ ಕಾಮಗಾರಿಗಳಲ್ಲಿ ಗುತ್ತಿಗೆದಾರರು ಶೇ.20 ರಿಂದ 30ರಷ್ಟು ಕಡಿಮೆ ದರ ನಮೂದಿಸಿ ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಅನುಷ್ಠಾನ ಮಾಡುವುದಿಲ್ಲ. ಆದ್ದರಿಂದ, ಕಾಮಗಾರಿಗಳ ಮೇಲುಸ್ತುವಾರಿ ಮಾಡಲು ತಾಲ್ಲೂಕು ಮಟ್ಟದಲ್ಲಿ ಒಂದು ಕಾಮಗಾರಿ ಮೇಲುಸ್ತುವಾರಿ ಸಮಿತಿಯನ್ನು ರಚನೆ ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ಕರ್ನಾಟಕ ಮೂಲ ಸೌಕರ್ಯಗಳ ಅಭಿವೃದ್ಧಿ ನಿಗಮದ ವತಿಯಿಂದ ಸುವರ್ಣ ಗ್ರಾಮೋದಯ ಯೋಜನೆಯಡಿ ಮಂಜೂರಾಗಿರುವ ಕಟ್ಟಡಗಳು, ಪ್ರೌಢಶಾಲಾ ಕಟ್ಟಡಗಳನ್ನು ಪೂರ್ಣಗೊಳಿಸಿರುವುದಿಲ್ಲ. ಆದ್ದರಿಂದ, ಸದರಿಯವರಿಗೆ ಯಾವುದೆ ಕಾಮಗಾರಿಗಳನ್ನು ನೀಡಬಾರದೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕರ್ನಾಟಕ ಮೂಲ ಸೌಕರ್ಯಗಳ ಅಭಿವೃದ್ಧಿ ನಿಗಮದ ವತಿಯಿಂದ ಅರಸೀಕೆರೆ ತಾಲ್ಲೂಕಿನಲ್ಲಿ ಅನುಷ್ಠಾನ ಮಾಡುತ್ತಿರುವ ಕಾಮಗಾರಿಗಳ ಬಗ್ಗೆ ಜುಲೈ 2011ರ ಮಾಹೆಯಲ್ಲಿ ಪರಿಶೀಲನೆ ನಡೆಸಲಾಗಿದೆ. ಕಾಮಗಾರಿಗಳು ಪ್ರಗತಿಯಲ್ಲಿದ್ದು, ತ್ವರಿತವಾಗಿ ಪೂರ್ಣಗೊಳಿಸಲು ತಿಳಿಸಲಾಗಿದೆ. ಇವುಗಳು ಹಿಂದಿನ ಸಾಲಿನಲ್ಲಿ ನೀಡಿದ ಕಾಮಗಾರಿಗಳಾಗಿದ್ದು, ಹೊಸದಾಗಿ ಯಾವುದೇ ಕಾಮಗಾರಿಗಳನ್ನು ಕರ್ನಾಟಕ ಮೂಲ ಸೌಕರ್ಯಗಳ ಅಭಿವೃದ್ಧಿ ನಿಗಮಕ್ಕೆ ನೀಡಿರುವುದಿಲ್ಲವೆಂದು ಸಭೆಗೆ ವಿವರ ನೀಡಿದರು. | |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಮಟ್ಟನವಿಲೆ ಪ್ರೌಢಶಾಲೆಯ ಶಿಕ್ಷಕರುಗಳಲ್ಲಿ 2 ಗುಂಪುಗಳಾಗಿದ್ದು, ಈ ಬಗ್ಗೆ ಪರಿಶೀಲಿಸಿ ಅಗತ್ಯ ಬದಲಾವಣೆಗಳನ್ನು ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಉತ್ತರಿಸುತ್ತಾ, ಮಟ್ಟನವಿಲೆ ಪ್ರೌಢಶಾಲೆಯ ಪ್ರಕರಣ ಗಮನಕ್ಕೆ ಬಂದಿದ್ದು, ಈ ಬಗ್ಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಪ್ರಾರಂಭವಾಗಿರುವ ಪಿ.ಯು.ಸಿ ಕಾಲೇಜಿನ ವಿಜ್ಞಾನ ವಿಭಾಗಕ್ಕೆ ಅವಶ್ಯವಿರುವ ಲ್ಯಾಬ್ ಮತ್ತು ಸಲಕರಣೆಗಳು ಇಲ್ಲದೆ ವಿದ್ಯಾರ್ಥಿಗಳಿಗೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ, ವಿಜ್ಞಾನ ವಿಷಯಕ್ಕೆ ಅಗತ್ಯವಿರುವ ಲ್ಯಾಬ್ ಮತ್ತು ಸಲಕರಣೆಗಳನ್ನು ಒದಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಪ್ರೌಢಶಾಲೆ ಮತ್ತು ಪಿ.ಯು.ಸಿ ಕಾಲೇಜನ್ನು ಪ್ರತ್ಯೇಕ ಮಾಡಲಾಗಿದೆ. ಪ್ರೌಢಶಾಲೆಯ ಜೊತೆಗಿರುವ ಪಿ.ಯು.ಸಿ ಕಾಲೇಜಿನ ಲ್ಯಾಬಿಗೆ ಪ್ರೌಢಶಾಲೆಯ ಕೊಠಡಿಯನ್ನೇ ನೀಡಲಾಗಿರುತ್ತದೆ ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಅರೇಹಳ್ಳಿಯಲ್ಲಿ ಪಿ.ಯು.ಸಿ ಕಾಲೇಜು ಪ್ರಾರಂಭವಾಗಿದ್ದು, ಅಲ್ಲಿಗೆ ವಿಜ್ಞಾನ ವಿಷಯವೂ ಮಂಜೂರಾಗಿರುತ್ತದೆ. ಕಲೆ ಮತ್ತು ವಾಣಿಜ್ಯ ಕಾಲೇಜುಗಳನ್ನು ಪ್ರಾರಂಭ ಮಾಡಲಾಗಿದೆ. ಆದರೆ, ವಿಜ್ಞಾನ ವಿಷಯದ ಕಾಲೇಜನ್ನು ಪ್ರಾರಂಭ ಮಾಡಿರುವುದಿಲ್ಲ. 3 ವರ್ಷಗಳ ಒಳಗಾಗಿ ಕಾಲೇಜನ್ನು ಪ್ರಾರಂಭ ಮಾಡದೇ ಹೋದಲ್ಲಿ ನಿಯಮಾನುಸಾರ ಕಾಲೇಜನ್ನು ರದ್ದುಪಡಿಸಲಾಗುತ್ತದೆ. ಆದ್ದರಿಂದ, ವಿಜ್ಞಾನ ವಿಷಯದ ಕಾಲೇಜನ್ನು ಪ್ರಾರಂಭಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ. ಶಿವಲಿಂಗೇಗೌಡರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಉಪನ್ಯಾಸಕರ ಕೊರತೆ ಬಹಳ ಇರುತ್ತದೆ. ಇದು ಕೇವಲ ಹಾಸನ ಜಿಲ್ಲೆಯ ಸಮಸ್ಯೆಯಾಗಿರುವುದಿಲ್ಲ. ಈ ಬಗ್ಗೆ ವಿಧಾನಸೌಧದಲ್ಲಿ ಪಕ್ಷಾತೀತವಾಗಿ ಚರ್ಚೆ ಮಾಡಲಾಗಿದೆಯೆಂದು ಸಭೆಯಲ್ಲಿ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿಗುರುದೇವ್ ರವರು ಮಾತನಾಡುತ್ತಾ, ಹಿಂದಿನ ಸಾಲಿನಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ವಿನಿಯೋಗ ಮಾಡದೆ ವ್ಯಪಗತ ಮಾಡಿರುತ್ತಾರೆ ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮುಂದುವರೆದು, ಕಳೆದ ಸಾಲಿನಲ್ಲಿ ಅನುಷ್ಠಾನ ಮಾಡಿರುವ ಕಾಮಗಾರಿಗಳ ಗುಣಮಟ್ಟ ಕಳಪೆಯಾಗಿದ್ದು, ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು. | |

| | | | |
|---|---|---|---|
| | | ನಡೆಯುತ್ತಿರುವುದು ಕಂಡುಬಂದಿದೆ. ಆದ್ದರಿಂದ, ಎ.ಎನ್.ಎಂ. ರವರು ವಸತಿಗೃಹದಲ್ಲಿಯೇ ಇರಲು ಕಟ್ಟುನಿಟ್ಟಿನ ಸೂಚನೆಯನ್ನು ನೀಡಬೇಕೆಂದು ಕೋರಿದರು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ಆರೋಗ್ಯ ಇಲಾಖೆಯಡಿ ಸರ್ಕಾರದಿಂದ ಕೋಟ್ಯಾಂತರ ರೂಪಾಯಿ ಹಣವನ್ನು ವ್ಯಯ ಮಾಡಿ ಸಿಬ್ಬಂದಿ ವಸತಿ ಗೃಹಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಆದರೆ, ವಸತಿ ಗೃಹಗಳಲ್ಲಿ ಸರ್ಕಾರಿ ನೌಕರರು ವಾಸವಿಲ್ಲದೆ ಸಾರ್ವಜನಿಕರಿಗೆ ಬಹಳ ತೊಂದರೆಯಾಗಿರುತ್ತದೆ. ಬಡಜನರಿಗೆ ಖಾಸಗಿ ಆಸ್ಪತ್ರೆಗಳಿಗೆ ಹೋಗಿ ಚಿಕಿತ್ಸೆಪಡೆಯಬೇಕಾದಲ್ಲಿ ಸಾವಿರಾರು ರೂಪಾಯಿಗಳ ಖರ್ಚು ತಗಲುವುದರಿಂದ, ಅದನ್ನು ಭರಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ, ಉಪ ಕೇಂದ್ರಗಳಲ್ಲಿರುವ ಸಿಬ್ಬಂದಿ ವಸತಿಗೃಹಗಳಲ್ಲಿ ಕಡ್ಡಾಯವಾಗಿ ವಾಸ ಮಾಡಲು ನಿರ್ದೇಶನ ನೀಡಬೇಕೆಂದು ಕೋರಿದರು.<br>ಮುಂದುವರೆದು, ಸರ್ಕಾರಿ ಕೋಟಾದಲ್ಲಿ ವ್ಯಾಸಂಗ ಮಾಡುವ ವೈದ್ಯರುಗಳಿಗೆ ಕಡ್ಡಾಯವಾಗಿ 5 ವರ್ಷಗಳ ಕಾಲ ಗ್ರಾಮೀಣ ಆಸ್ಪತ್ರೆಗಳಲ್ಲಿ ಕೆಲಸ ನಿರ್ವಹಿಸುವಂತೆ ತಿಳಿಸಬೇಕು, ಉನ್ನತ ವ್ಯಾಸಂಗಕ್ಕೆ 5 ವರ್ಷಗಳ ಒಳಗಾಗಿ ಅನುಮತಿಯನ್ನು ನೀಡಬಾರದು ಮತ್ತು ಇನ್ನೊಬ್ಬ ವೈದ್ಯರು ಬರುವವರೆಗೆ ಹಾಲಿ ಕೆಲಸ ನಿರ್ವಹಿಸುತ್ತಿರುವ ವೈದ್ಯರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಬಾರದೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಕೆಂಕೆರೆ ಆಸ್ಪತ್ರೆಯ ವೈದ್ಯರು ಆರೋಗ್ಯ ರಕ್ಷಾ ಸಮಿತಿಗೆ ಬಿಡುಗಡೆಯಾದ ಅನುದಾನ ರೂ.1.75ಲಕ್ಷಗಳನ್ನು ದುರುಪಯೋಗ ಮಾಡಿಕೊಂಡಿರುತ್ತಾರೆ. ಇವರ ಮೇಲೆ ಶಿಸ್ತುಕ್ರಮ ಜರುಗಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಆರೋಗ್ಯ ಉಪ ಕೇಂದ್ರಗಳ ಶುಶ್ರೂಷಕಿಯರು ವಸತಿ ಗೃಹಗಳಲ್ಲಿಯೇ ಕಡ್ಡಾಯವಾಗಿ ವಾಸಿಸಲು ಮತ್ತು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಕೇಂದ್ರಸ್ಥಾನದಲ್ಲಿಯೇ ವಾಸಿಸುವಂತೆ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗುವುದೆಂದು ತಿಳಿಸಿದರು. ಮತ್ತು ಕೆಂಕೆರೆ ಆಸ್ಪತ್ರೆ ವೈದ್ಯರ ಮೇಲೆ ಅಗತ್ಯ ಶಿಸ್ತುಕ್ರಮ ಜರುಗಿಸಲಾಗುವುದೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜಿ.ಟಿ.ಇಂದಿರಾಧರ್ಮಪ್ಪರವರು ಮಾತನಾಡುತ್ತಾ, ಗೊಬ್ಬಲಗೋಡು ಸರ್ಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿಲ್ಲದ ಮಕ್ಕಳ ಪೋಷಕರನ್ನು ಎಸ್.ಡಿ.ಎಂ.ಸಿ ಅಧ್ಯಕ್ಷರನ್ನಾಗಿ ನೇಮಕ ಮಾಡಿರುವುದು ಕಂಡುಬಂದಿರುತ್ತದೆ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು. | |

| | | | |
|---|---|---|---|
| | | ಕೇಂದ್ರಗಳ ವೈದ್ಯರುಗಳಿಗೆ ನೋಟೀಸ್ ಜಾರಿ ಮಾಡಿ ವಿವರಣೆ ಪಡೆಯಲು ಕ್ರಮ ವಹಿಸುವುದಾಗಿ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ವೈದ್ಯರುಗಳಿಗೆ ಖಾಸಗಿ ಆಸ್ಪತ್ರೆಗಳಲ್ಲಿ ಹೆಚ್ಚಿನ ವೇತನ ನೀಡುವುದರಿಂದ, ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರ ನೀಡುವ ರೂ.50000/-ಗಳ ವೇತನದಲ್ಲಿ ಕೆಲಸ ನಿರ್ವಹಿಸಲು ಆಸಕ್ತಿ ವಹಿಸುವುದಿಲ್ಲ. ಆದ್ದರಿಂದ, ವೈದ್ಯರುಗಳ ಬೇಡಿಕೆ ಮತ್ತು ಅವಶ್ಯಕತೆಗನುಗುಣವಾಗಿ ವೇತನವನ್ನು ನೀಡುವ ಬಗ್ಗೆ ನಿರ್ಣಯವನ್ನು ಮಾಡಬೇಕೆಂದು ಮತ್ತು ಸರ್ಕಾರಿ ಕೋಟಾದಲ್ಲಿ ವ್ಯಾಸಂಗ ಮಾಡುವ ವೈದ್ಯಕೀಯ ವಿದ್ಯಾರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಪ್ರದೇಶದಲ್ಲಿ 5 ವರ್ಷಗಳ ಕಾಲ ಸೇವೆಯನ್ನು ಮಾಡಲು ಲಿಖಿತವಾಗಿ ಬರೆಸಿಕೊಳ್ಳುವ ಬಗ್ಗೆಯೂ ಸಹ ನಿರ್ಣಯವನ್ನು ಮಾಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿಗುರುದೇವ್ ರವರು ಮಾತನಾಡುತ್ತಾ, ಆಲೂರಿನಲ್ಲಿ ಎ.ಎನ್.ಎಂ ರವರು 3 ತಿಂಗಳಿನಿಂದ ರಜಾ ಹಾಕಿದ್ದು, ಅವರಿಗೆ ಕೇವಲ ನೋಟೀಸು ಜಾರಿ ಮಾಡಲಾಗಿದೆ. ಇದರಿಂದ, ಯಾವುದೇ ಪ್ರಯೋಜನವಾಗಿರುವುದಿಲ್ಲ. ಅಲ್ಲದೆ, ಕೆ.ಹೊಸಕೋಟೆಗೆ ಆಯುಷ್ ವೈದ್ಯರ ಬದಲಿಗೆ ಎಂ.ಬಿ.ಬಿ.ಎಸ್ ವೈದ್ಯರನ್ನು ನೇಮಿಸುವಂತೆ ಸಾರ್ವಜನಿಕರಿಂದ ಒತ್ತಾಯ ಬರುತ್ತಿದ್ದು, ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಂದುವರೆದು, ಸಕಲೇಶಪುರ ಸಾರ್ವಜನಿಕ ಆಸ್ಪತ್ರೆಗೆ ರೋಗಿಗಳು ಚಿಕಿತ್ಸೆಗಾಗಿ ಹೋದಲ್ಲಿ ವೈದ್ಯರು ಖಾಸಗಿ ಕ್ಲಿನಿಕ್ ಗೆ ಬರುವಂತೆ ಚೀಟಿಯನ್ನು ನೀಡುತ್ತಿರುವುದು ಕಂಡುಬರುತ್ತಿದೆ. ಈ ಬಗ್ಗೆಯೂ ಸಹ ಯಾವುದೇ ಕ್ರಮ ವಹಿಸಿರುವುದಿಲ್ಲ. ಅಲ್ಲದೆ, ಹೊಸಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಿಗೆ ಈ ಹಿಂದೆ ಪ್ರಭಾರದಲ್ಲಿದ್ದ ವೈದ್ಯರು ಚಾರ್ಜನ್ನು ನೀಡಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಆಲೂರು ತಾಲ್ಲೂಕು ವೈದ್ಯಾಧಿಕಾರಿಯವರಿಗೆ ಅಗತ್ಯ ಕ್ರಮ ವಹಿಸುವಂತೆ ನಿರ್ದೇಶನ ನೀಡಲಾಗುವುದೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, ಜಾವಗಲ್ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೆಲಸ ನಿರ್ಹಿಸುತ್ತಿರುವ ಶುಶ್ರೂಷಕಿಗೆ 8 ತಿಂಗಳಿನಿಂದ ವೇತನ ನೀಡಿರುವುದಿಲ್ಲ. ಈ ಬಗ್ಗೆ ಜಿಲ್ಲಾ ಆರೋಗ್ಯಾಧಿಕಾರಿಯವರು ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು, ತಾಲ್ಲೂಕು ಪಂಚಾಯಿತಿ, ಹಾಸನ ಇವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಆರೋಗ್ಯ ಉಪ ಕೇಂದ್ರಗಳ ಎ.ಎನ್.ಎಂ. ಗಳು ಅಲ್ಲಿಯೇ ಇರಲು ಅನುಕೂಲವಾಗುವಂತೆ ಸಿಬ್ಬಂದಿ ವಸತಿ ಗೃಹವನ್ನು ರೂ.20.00ಲಕ್ಷಗಳ ಅಂದಾಜಿನಲ್ಲಿ ನಿರ್ಮಾಣ ಮಾಡಲಾಗಿರುತ್ತದೆ. ಆದರೆ, ಎ.ಎನ್.ಎಂ. ರವರು ಅಲ್ಲಿ ವಾಸವಿಲ್ಲದೇ ಸಿಬ್ಬಂದಿ ವಸತಿಗೃಹಗಳು ಖಾಲಿಯಿದ್ದು, ಅಲ್ಲಿ ಅನೈತಿಕ ಚಟುವಟಿಕೆಗಳು | |

| | | | |
|---|---|---|---|
| | | ಮಾಡಲು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದು ನಂತರ ಕ್ರಮ ವಹಿಸಬೇಕೆಂದು ತಿಳಿಸಲಾಗಿದ್ದರೂ ಸಹ ಸಹಾಯಕ ನಿರ್ದೇಶಕರು, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆರವರು ಇಲ್ಲಿಯವರೆಗೆ ಜಿಲ್ಲಾ ಪಂಚಾಯಿತಿ ಸದಸ್ಯರನ್ನು ಸಂಪರ್ಕಿಸಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಂದುವರೆದು, ಆರೋಗ್ಯ ಇಲಾಖೆಯಲ್ಲಿ ವೈದ್ಯರ ನೇಮಕಾತಿಗೆ ಸಂಬಂಧಿಸಿದಂತೆ, ಯಾವುದೇ ವೈದ್ಯರು ಮುಂದೆ ಬರುತ್ತಿಲ್ಲವೆಂದು ಜಿಲ್ಲಾ ಆರೋಗ್ಯಾಧಿಕಾರಿಗಳು ತಿಳಿಸಿರುತ್ತಾರೆ. ಆದರೆ, ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಸಮರ್ಪಕವಾಗಿ ಕೆಲಸ ನಿರ್ವಹಿಸುತ್ತಿರುವ ಬಗ್ಗೆ ತಾಲ್ಲೂಕು ವೈದ್ಯಾಧಿಕಾರಿಯವರಿಂದ ವರದಿ ಪಡೆಯಲಾಗಿದೆಯೇ. ಪಡೆದಿದ್ದಲ್ಲಿ ಸಮರ್ಪಕವಾಗಿ ಕೆಲಸ ನಿರ್ವಹಿಸದೇ ಇರುವ ವೈದ್ಯರ ಮೇಲೆ ಯಾವ ಕ್ರಮ ಜರುಗಿಸಲಾಗಿದೆ ಎಂಬ ಬಗ್ಗೆ ವಿವರಣೆ ನೀಡುವಂತೆ ಕೋರಿದರು. ಹರದನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರ ಮೇಲೆ ಆರೋಪಗಳು ಇದ್ದರೂ ಸಹ ಯಾವುದೇ ಕ್ರಮ ವಹಿಸಿರುವುದಿಲ್ಲ. ಈ ಬಗ್ಗೆ ವಿವರಣೆ ನೀಡುವಂತೆ ಕೋರಿದರು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ಕಲ್ಯಾಡಿ ಪ್ರಾಥಮಿಕ ಆರೋಗ್ಯ ಕೇಂದ್ರದದಲ್ಲಿ ವೈದ್ಯರು ಇಲ್ಲದೆ ಸಾರ್ವಜನಿಕರಿಗೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ, ಬದಲಿ ವೈದ್ಯರನ್ನು ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು, ಅರಕಲಗೂಡು ತಾಲ್ಲೂಕು ಪಂಚಾಯಿತಿರವರು ಮಾತನಾಡುತ್ತಾ, ಬೆಳವಾಡಿಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪತಿ -ಪತ್ನಿಯರಿಬ್ಬರೂ ಸಹ ವೈದ್ಯರಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ಆದರೆ, ಸದರಿ ವೈದ್ಯರು ಮದ್ಯಾಹ್ನ:1-00 ಗಂಟೆಯವರೆಗೂ ಸಹ ಕೆಲಸ ನಿರ್ವಹಿಸುತ್ತಿಲ್ಲ. ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ್ಯೂ ಸಹ ವೈದ್ಯರು ಸಾರ್ವಜನಿಕರಿಗೆ ಉದಾಸೀನತೆಯಿಂದ ಮಾತನಾಡುತ್ತಾರೆ. ಆದ್ದರಿಂದ, ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಜಿಲ್ಲಾ ಆರೋಗ್ಯಾಧಿಕಾರಿಯವರು ಮಾತನಾಡುತ್ತಾ, ಬೆಳವಾಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರನ್ನು ವಜಾ ಮಾಡುವ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಯವರಿಗೆ ಕಡತವನ್ನು ಸಲ್ಲಿಸಲಾಗಿದೆ ಎಂದು ವಿವರ ನೀಡಿದರು.<br>ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಮಾತನಾಡುತ್ತಾ, ಹರದನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರ ಮೇಲೆ ಕ್ರಮ ವಹಿಸುವಂತೆ ಜಿಲ್ಲಾ ಆರೋಗ್ಯಾಧಿಕಾರಿಯವರಿಗೆ ತಿಳಿಸಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಆರೋಗ್ಯ ಸಮಿತಿ ಸಭೆಯನ್ನು ನಡೆಸಿ 24 X 7 ಆಸ್ಪತ್ರೆಗಳಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳಿಗೆ ವೈದ್ಯರುಗಳನ್ನು ಕರೆದುಕೊಂಡು ಹೋಗಿ ಅಲ್ಲಿಯ ರೀತಿಯಲ್ಲಿ ಕೆಲಸ ನಿರ್ವಹಿಸಲು ತಿಳಿಸಲಾಗಿದೆ. ಹೊಳೆನರಸೀಪುರ ತಾ: ಹರದನಹಳ್ಳಿ ಪ್ರಾಥಮಿಕ ಆರೋಗ್ಯ | ಹಾಗೂ ದಿನಾಂಕ: 10-06-2011ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮತ್ತು 2011-12ನೇ ಸಾಲಿನ ಕ್ರಿಯಾ ಯೋಜನೆಗೆ ಸಭೆಯಲ್ಲಿ ಸರ್ವಾನುಮತ ದಿಂದ ಅನುಮೋದಿಸಲಾಯಿತು. |

| | | | |
|---|---|---|---|
| | | ಕಟ್ಟಡವನ್ನು ನಿರ್ಮಿಸಲು ಅವಕಾಶ ನೀಡುವುದಿಲ್ಲ. ಆದ್ದರಿಂದ, ದುಸ್ಥಿತಿಯಲ್ಲಿರುವ ಶಾಲಾ ಕಟ್ಟಡಗಳನ್ನು ಇಲಾಖೆಯ ವಶಕ್ಕೆ ಪಡೆಯಲು ಮೊದಲು ಕ್ರಮ ವಹಿಸಿ ನಂತರ ಕೆಡವಲು ಕ್ರಮ ವಹಿಸಬೇಕೆಂದು ನಿರ್ಣಯಿಸಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಕೊಣನೂರಿನಲ್ಲಿ ಶ್ರೀ ಶ್ರೀನಿವಾಸ್ ಅವರಿಗೆ ಸೇರಿದ ಕಟ್ಟಡದಲ್ಲಿ ನಡೆಯುತ್ತಿರುವ ಕಿತ್ತೂರು ಚೆನ್ನಮ್ಮ ವಸತಿ ಶಾಲೆ ಕಟ್ಟಡಕ್ಕೆ 2009ರಿಂದ ಬಾಡಿಗೆ ನೀಡದೆ ಈಗ ಬಾಡಿಗೆಯನ್ನು ರೂ.22300/-ಗಳಿಗೆ ನಿಗದಿಪಡಿಸಿರುವ ಬಗ್ಗೆ ವಿವರಣೆ ನೀಡುವಂತೆ ಕೋರಿದರು.<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಉತ್ತರಿಸುತ್ತಾ, ಕೊಣನೂರಿನಲ್ಲಿ ನಡೆಯುತ್ತಿರುವ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಗೆ ಶ್ರೀ ಶ್ರೀನಿವಾಸ್ ಇವರ ಒಡೆತನದ ಕಟ್ಟಡವನ್ನು ಬಾಡಿಗೆಗೆ ಪಡೆದಿದ್ದು, ಲೋಕೋಪಯೋಗಿ ಇಲಾಖೆಯಿಂದ ಮಾಹೆಯಾನ ಬಾಡಿಗೆಯನ್ನು ನಿಗದಿಪಡಿಸಿ ಶಿಫಾರಸ್ಸು ಮಾಡಿದ ನಂತರ ಬಾಡಿಗೆಯನ್ನು ನೀಡುವ ಪದ್ಧತಿಯಿರುತ್ತದೆ. ಆದ್ದರಿಂದ, ಬಾಡಿಗೆಯನ್ನು ನೀಡುವುದು ವಿಳಂಬವಾಗಿರುತ್ತದೆ ಮತ್ತು ಸದರಿ ಕಟ್ಟಡವು ಎರಡು ಅಂತಸ್ತನ್ನು ಹೊಂದಿದ್ದು, ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊಂದಿರುವುದರಿಂದ, ರೂ.22300/-ಗಳ ಬಾಡಿಗೆಯನ್ನು ನೀಡಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು.<br>2011-12ನೇ ಸಾಲಿಗೆ ಲಿಂಕ್ ಪುಸ್ತಕದಲ್ಲಿ 3054 ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆಯಡಿ ರೂ.220.00ಲಕ್ಷಗಳ ಅನುದಾನ ನಿಗದಿಯಾಗಿದ್ದು, ಹೆಚ್ಚುವರಿಯಾಗಿ ರೂ.80.00ಲಕ್ಷಗಳ ಕಾಮಗಾರಿ ತೆಗೆದುಕೊಳ್ಳಲು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. | ನಿರ್ಮಿಸಿರುವ ಶಾಲಾ ಕಟ್ಟಡಗಳನ್ನು ಗ್ರಾಮ ಪಂಚಾಯಿತಿಯಲ್ಲಿ ಖಾತೆ ಮಾಡಿಸಿಕೊಂಡು ವಶಕ್ಕೆ ಪಡೆಯಲು ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು.<br>ಸಭೆಯಲ್ಲಿ ಚರ್ಚಿಸಿದಂತೆ, 2011-12ನೇ ಸಾಲಿಗೆ ಲಿಂಕ್ ಪುಸ್ತಕದಲ್ಲಿ 3054 ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆಯಡಿ ರೂ.220.00 ಲಕ್ಷಗಳ ಅನುದಾನ ನಿಗದಿಯಾಗಿದ್ದು, ಹೆಚ್ಚುವರಿಯಾಗಿ ರೂ.80.00ಲಕ್ಷಗಳ ಕಾಮಗಾರಿ ತೆಗೆದುಕೊಳ್ಳಲು ಸಭೆಯು ಸರ್ವಾನುಮತದಿಂದ ಅನುಮೋದಿಸಿತು.<br>ಹಾಗೂ ದಿನಾಂಕ: 08-06-2011ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |
| 4 | ದಿನಾಂಕ: 10-06-2011ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ | ದಿನಾಂಕ: 10-06-2011ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಬಿ.ಎನ್.ಸತ್ಯನಾರಾಯಣ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಸಭೆಯ ನಡವಳಿಗಳನ್ನು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣಿ ರವರು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ಪಂಚಾಯತ್ ಯುವಕ್ರೀಡಾ ಔರ್ ಖೇಲ್ ಅಭಿಯಾನ್ ವತಿಯಿಂದ ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಶಾಲಾ ಮೈದಾನವನ್ನು ಸಮತಟ್ಟು | ಸಭೆಯಲ್ಲಿ ಚರ್ಚಿಸಿದಂತೆ, ಸಂಬಂಧಪಟ್ಟ ಅಧಿಕಾರಿಗಳು ಮಾನ್ಯ ಸದಸ್ಯರು ಪ್ರಸ್ತಾಪಿಸಿರುವ ವಿಷಯಗಳಿಗೆ ಸಂಬಂಧಿಸಿದಂತೆ, ಅಗತ್ಯ ಕ್ರಮ ವಹಿಸುವಂತೆ ತಿಳಿಸಲಾಯಿತು. |

| | | | |
|---|---|---|---|
| | | ಯಶಸ್ವಿಗೊಳಿಸಬಹುದಾಗಿದ್ದು, ಅವಕಾಶವಿರುವ ಗ್ರಾಮಗಳಿಗೆ ನದಿಮೂಲಗಳಿಂದ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಐ.ಎಂ.ಐ.ಎಸ್ ಅಡಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅನುದಾನವನ್ನು ಪ್ರತ್ಯೇಕವಾಗಿ ನೀಡುವುದಿಲ್ಲ. ಒಟ್ಟಿಗೆ ಬಿಡುಗಡೆ ಮಾಡುವುದರಿಂದ, ಕೊಳವೆ ಬಾವಿಗಳನ್ನು ಕೊನೆಯ ಆದ್ಯತೆ ಮೇಲೆ ಕುಡಿಯುವ ನೀರಿನ ಮೂಲಗಳೇ ಇಲ್ಲದಿರುವ ಕಡೆಗಳಲ್ಲಿ ಸೂಕ್ತ ಸಮರ್ಥನೆಯೊಂದಿಗೆ ಕೊರೆಯಬಹುದಾಗಿರುತ್ತದೆ ಎಂದು ವಿವರ ನೀಡಿದರು. ಅರಕಲಗೂಡು ತಾಲ್ಲೂಕಿನ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಿಗೆ ಕುಡಿಯುವ ನೀರನ್ನು ಸರಬರಾಜು ಮಾಡಲು ಬಹುಗ್ರಾಮ ಯೋಜನೆಯನ್ನು ಕೈಗೆತ್ತಿಕೊಳ್ಳಲು ಕ್ರಮ ವಹಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಈಗಾಗಲೇ ತಿಳಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು. | |
| 2 | ದಿನಾಂಕ: 08-06-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ | ದಿನಾಂಕ: 08-06-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಅಧ್ಯಕ್ಷರು ಸಭೆಗೆ ಮಂಡಿಸಿದರು ಮತ್ತು ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಸಭೆಯ ನಡವಳಿಗಳನ್ನು ಅನುಮೋದಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ, ದಿನಾಂಕ: 08-06-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |
| 3 | ದಿನಾಂಕ: 08-06-2011ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ | ದಿನಾಂಕ: 08-06-2011ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀಮತಿ ಪಾರ್ವತಮ್ಮ ನಂಜುಂಡಚಾರ್ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣ ರವರು ಸಭೆಯ ನಡವಳಿಗಳನ್ನು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಸಾರ್ವಜನಿಕ ಶಿಕ್ಷಣ ಇಲಾಖೆಯಡಿ ದುರಸ್ಥಿ ಪಡಿಸಲು ಸಾಧ್ಯವಿಲ್ಲದ ಪ್ರಾಥಮಿಕ ಶಾಲಾ ಕಟ್ಟಡಗಳನ್ನು ಕೆಡವಬೇಕಾದಲ್ಲಿ, ಯಾವ ಶಾಲೆಯ ಕಟ್ಟಡವೆಂದು ನಿರ್ದಿಷ್ಟ ಪಡಿಸಿ, ಸದರಿ ಕಟ್ಟಡವನ್ನು ಬೀಳಿಸುವ ಮುನ್ನ ಸ್ಥಾಯಿ ಸಮಿತಿ ಅನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದೆಂದು ಮತ್ತೊಮ್ಮೆ ನಿರ್ಣಯವನ್ನು ಮಾಡುವುದು ಸೂಕ್ತ. ಅಲ್ಲದೆ, ಈಗ ಕೆಡವಬೇಕಾದ ಶಾಲಾ ಕಟ್ಟಡಗಳಿಗೆ ಆ ಊರಿನ ಹಿಂದಿನ ಗ್ರಾಮಸ್ಥರು ಭೂಮಿಯನ್ನು ದಾನವಾಗಿ ನೀಡಿದ್ದು, ಅವುಗಳನ್ನು ಇಲ್ಲಿಯವರೆಗೆ ಗ್ರಾಮ ಪಂಚಾಯಿತಿ ಖಾತೆ ಮಾಡಿಸಿಕೊಂಡು ಇಲಾಖೆಯ ವಶಕ್ಕೆ ಪಡೆದಿರುವುದಿಲ್ಲ. ಒಂದು ವೇಳೆ ದುಸ್ಥಿತಿಯಲ್ಲಿರುವ ಶಾಲಾ ಕಟ್ಟಡವನ್ನು ಇಲಾಖೆಯ ವಶಕ್ಕೆ ತೆಗೆದುಕೊಳ್ಳದೆ ಕೆಡವಿದಲ್ಲಿ ಅದರ ಮಾಲೀಕರು ತಮಗೆ ಸೇರಬೇಕೆಂದು ದಾವೆ ಹೂಡಿ ಹೊಸದಾಗಿ | ಸಭೆಯಲ್ಲಿ ವಿವಿಧ ವಿಷಯಗಳ ಬಗ್ಗೆ ಸಮಗ್ರವಾಗಿ ಚರ್ಚಿಸಲಾಯಿತು.<br>ಜಿಲ್ಲೆಯಲ್ಲಿ ತುಂಬಾ ದುಸ್ಥಿತಿಯಲ್ಲಿರುವ ಪ್ರಾಥಮಿಕ ಶಾಲಾ ಕಟ್ಟಡಗಳನ್ನು ಕೆಡವುದಕ್ಕೆ ಮುಂಚಿತವಾಗಿ ಯಾವ ಶಾಲಾ ಕಟ್ಟಡ ಎಂಬ ಬಗ್ಗೆ ಪೂರ್ಣ ವಿವರದೊಂದಿಗೆ ಮತ್ತೊಮ್ಮೆ ಸ್ಥಾಯಿ ಸಮಿತಿಯಲ್ಲಿ ಅನುಮೋದನೆಯನ್ನು ಪಡೆದು ನಂತರ ಕಟ್ಟಡಗಳನ್ನು ಕೆಡವಲು ಕ್ರಮ ವಹಿಸಬೇಕೆಂದು ಮತ್ತು ಬಹಳ ಹಿಂದೆ |

ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಮಾತನಾಡುತ್ತಾ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ (ಗ್ರಾಮೀಣ ನೀರು ಸರಬರಾಜು) ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಕುಡಿಯುವ ನೀರಿನ ಕ್ರಿಯಾ ಯೋಜನೆಯ ಕಾಮಗಾರಿಗಳ ಪಟ್ಟಿಗೆ ಸರ್ಕಾರದಿಂದ ಅನುಮೋದನೆಯಾಗಿ ಬಂದಿದೆ ಎಂದು ತಿಳಿಸಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, 11-12ನೇ ಸಾಲಿಗೆ ರೂ.33.40ಕೋಟಿಗಳ ಅನುದಾನದಲ್ಲಿ 1411 ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕ್ರಿಯಾ ಯೋಜನೆಗೆ ಸರ್ಕಾರದಿಂದ ಅನುಮೋದನೆ ನೀಡಲಾಗಿರುತ್ತದೆ. ಅಲ್ಲದೆ, ದಿನಾಂಕ: 27-07-2011ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಬರೆದಿರುವ ಪತ್ರದಲ್ಲಿ 2011-12ನೇ ಸಾಲಿಗೆ ಅನುಮೋದನೆಯಾಗಿರುವ ಕ್ರಿಯಾ ಯೋಜನೆಯಲ್ಲಿ ಸೇರಿಲ್ಲದ ತೀರಾ ಅಗತ್ಯವೆನಿಸಿರುವ ಅತೀ ತುರ್ತಾಗಿ ಅನುಷ್ಠಾನಗೊಳಿಸಬೇಕಾದಲ್ಲಿ ಗ್ರಾಮವಾರು ಮತ್ತು ಕಾಮಗಾರಿವಾರು ವಿವರಗಳನ್ನು ಸೂಕ್ತ ಸಮರ್ಥನೆಯೊಂದಿಗೆ ಸಲ್ಲಿಸಲು ಅವಕಾಶವಿದೆಯೆಂದು ತಿಳಿಸಿರುವ ಹಿನ್ನೆಲೆಯಲ್ಲಿ ಪ್ರತಿ ಸದಸ್ಯರಿಂದ ರೂ.10.00ಲಕ್ಷಗಳವರೆಗಿನ ಕುಡಿಯುವ ನೀರಿನ ಕಾಮಗಾರಿಗಳ ಪಟ್ಟಿಯನ್ನು ಪಡೆಯಲಾಗುತ್ತಿದೆ ಮತ್ತು ಬಹುಗ್ರಾಮ ಯೋಜನೆಯನ್ನು ಪ್ರತ್ಯೇಕವಾಗಿ ತೆಗೆದುಕೊಳ್ಳಲು ತಿಳಿಸಲಾಗಿದೆ ಎಂದು ತಿಳಿಸಿದರು.

ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಅರಸೀಕೆರೆರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಸದಸ್ಯರಿಂದ ಸುಮಾರು ರೂ.4.00ಕೋಟಿಗಳ ಅನುದಾನಕ್ಕೆ ಕಾಮಗಾರಿಗಳ ಪಟ್ಟಿಯನ್ನು ಪಡೆದು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಕ್ಕೆ ಕಳುಹಿಸಲಾಗಿತ್ತು. ಆದರೆ, ಅರಸೀಕೆರೆ ತಾಲ್ಲೂಕಿಗೆ ಮುಂದುವರೆದ ಕಾಮಗಾರಿಗಳನ್ನು ಒಳಗೊಂಡಂತೆ ಕೇವಲ ರೂ.1.67ಕೋಟಿಗಳ ಕಾಮಗಾರಿಗಳಿಗೆ ಮಾತ್ರ ಅನುಮೋದನೆಯಾಗಿರುತ್ತದೆ ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ಅರಸೀಕೆರೆ ತಾಲ್ಲೂಕಿನಲ್ಲಿ ಯಾವುದೇ ನೀರಿನ ಮೂಲವೂ ಇರುವುದಿಲ್ಲ. ಅಲ್ಲದೆ, ತಾಲ್ಲೂಕಿನಲ್ಲಿ ಫ್ಲೋರೈಡ್ ಅಂಶ ಹೆಚ್ಚಾಗಿದ್ದರೂ ಅನುದಾನ ಕಡಿತಗೊಳಿಸಿರುವುದು ಸರಿಯಲ್ಲವೆಂದು ತಿಳಿಸಿದರು. ಅಲ್ಲದೆ, ಕೇಂದ್ರ ಸರ್ಕಾರದ ಅನುದಾನದಲ್ಲಿ ಕೊಳವೆ ಬಾವಿಗಳನ್ನು ಕೊರೆಸಲು ಅವಕಾಶವಿರುವುದಿಲ್ಲ. ಆದ್ದರಿಂದ, ರಾಜ್ಯ ಸರ್ಕಾರದಿಂದ ಕುಡಿಯುವ ನೀರಿನ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನದ ವಿವರಗಳನ್ನು ನೀಡುವಂತೆ ಕೋರಿದರು.

ಮಾನ್ಯ ಅಧ್ಯಕ್ಷರು, ಅರಕಲಗೂಡು ತಾಲ್ಲೂಕು ಪಂಚಾಯಿತಿ, ಇವರು ಮಾತನಾಡುತ್ತಾ, 2010-11ನೇ ಸಾಲಿಗೆ ಅರಕಲಗೂಡು ತಾಲ್ಲೂಕಿಗೆ ರೂ.2.20ಕೋಟಿಗಳ ಅನುದಾನ ನಿಗದಿಯಾಗಿದ್ದು, ಅದರಲ್ಲಿ ರೂ.12.00ರಿಂದ 13.00ಲಕ್ಷಗಳನ್ನು ಮಾತ್ರ ಖರ್ಚು ಮಾಡಲಾಗಿದೆ. ಕಾಮಗಾರಿಗಳನ್ನು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನ ಮಾಡಿರುವುದಿಲ್ಲ. ಅರಕಲಗೂಡು ತಾಲ್ಲೂಕಿನಲ್ಲಿ ಎರಡು ನದಿಮೂಲಗಳು ಇರುವುದರಿಂದ, ಬಹುಗ್ರಾಮ ಯೋಜನೆಯನ್ನು

**ದಿನಾಂಕ: 01-08-2011ರಂದು ಪೂರ್ವಾಹ್ನ:11-00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳು**

**ಅಧ್ಯಕ್ಷತೆ: ಶ್ರೀ ಬಿ.ಡಿ.ಚಂದ್ರೇಗೌಡ,**

**ಅಧ್ಯಕ್ಷರು,**

**ಜಿಲ್ಲಾ ಪಂಚಾಯತ್, ಹಾಸನ.**

ಹಾಜರಿ: 48

ಗೈರು ಹಾಜರಿ10

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| 1 | ದಿನಾಂಕ: 12-05-2011 ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ. | ದಿನಾಂಕ: 12-05-2011ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಮಾನ್ಯ ಅಧ್ಯಕ್ಷರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಸಭೆಯಲ್ಲಿ ಮಂಡಿಸಿದರು ಹಾಗೂ ಸದಸ್ಯರು ಸದರಿ ನಡವಳಿಗಳನ್ನು ಅಂಗೀಕರಿಸಲು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, 2011-12ನೇ ಸಾಲಿಗೆ ಕುಡಿಯುವ ನೀರಿನ ಯೋಜನೆಗಳಿಗೆ ಸಂಬಂಧಿಸಿದಂತೆ, ಕ್ರಿಯಾ ಯೋಜನೆಯನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು ಸಿದ್ಧಪಡಿಸಿ ಕಾರ್ಯಪಾಲಕ ಅಭಿಯಂತರರ ಕಛೇರಿಗೆ ಸಲ್ಲಿಸಲಾಗಿದೆ ಎಂದು ತಿಳಿಸಿರುತ್ತಾರೆ. ಆದರೆ, ನಾವು ನೀಡಿರುವ ಕಾಮಗಾರಿಗಳ ಪಟ್ಟಿಗೆ ಇಲ್ಲಿಯವರೆಗೆ ಅನುಮೋದನೆಯಾಗಿರುವ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಈ ಬಗ್ಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳು ಏನು ಕ್ರಮ ವಹಿಸಿರುತ್ತಾರೆ ಎಂಬ ಬಗ್ಗೆ ವಿವರಗಳನ್ನು ನೀಡುವಂತೆ ಕೋರಿದರು. 2010-11ನೇ ಸಾಲಿನ ಕುಡಿಯುವ ನೀರಿನ ಯೋಜನೆಗಳಿಗೆ ಬಿಡುಗಡೆಯಾದ ಹಣವನ್ನು ವಿನಿಯೋಗಿಸಿರುವುದಿಲ್ಲ. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ವತಿಯಿಂದ ಅನುಷ್ಠಾನ ಮಾಡಬೇಕಾಗಿರುವ ಕಾಮಗಾರಿಗಳನ್ನು ಕರ್ನಾಟಕ ಗ್ರಾಮೀಣ ಮೂಲಸೌಕರ್ಯಗಳ ಅಭಿವೃದ್ಧಿ ನಿಗಮಕ್ಕೆ ನೀಡಲಾಗುತ್ತಿದೆ. ಇದರಿಂದ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳು ಏನೇನೂ ಕೆಲಸ ನಿರ್ವಹಿಸದೆ ಇರುವುದು ಕಂಡುಬರುತ್ತಿದೆ ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು. | ಸುದೀರ್ಘ ಚರ್ಚೆಯ ನಂತರ ದಿನಾಂಕ: 12-05-2011ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಪರಿಶೀಲಿಸಿ, ಚರ್ಚಿಸಿ, ಅಂಗೀಕರಿಸಿ ದಾಖಲು ಮಾಡಲು ಸರ್ವಾನುಮತದಿಂದ ನಿರ್ಣಯಿಸಿತು. |

3. ಮಾನ್ಯ ಲೋಕಸಭಾ ಸದಸ್ಯರು,ಹಾಸನ ಜಿಲ್ಲೆ, ಹಾಸನ ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
4. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ
5. ಹಾಸನ ಜಿಲ್ಲಾ ಪಂಚಾಯತ್, ಮಾನ್ಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಸಭೆಗೆ ಹಾಜರಾಗಲು ಕೋರಿದೆ.
7. ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರುಗಳಿಗೆ
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಆಪ್ತಶಾಖೆ, ಜಿಲ್ಲಾ ಪಂಚಾಯಿತಿ, ಹಾಸನ.
9. ಉಪ ಕಾರ್ಯದರ್ಶಿ( ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
10. ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
11. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
12. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
13. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
14. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ (ಗ್ರಾಮೀಣ ನೀರು ಸರಬರಾಜು ವಿಭಾಗ)ಮತ್ತು [illegible](ಸಾಮಾನ್ಯ ವಿಭಾಗ)
15. ಕಛೇರಿ ಪ್ರತಿ.

# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿಪಂಹಾ/ಪ.ಶಾ/23 /2011-12

ದಿನಾಂಕ: 18-07-2011

## ಸಭಾಹ್ವಾನ ಪತ್ರ

ದಿನಾಂಕ: **01-08-2011**ರಂದು ಸೋಮವಾರ ಪೂರ್ವಾಹ್ನ:**11-00** ಗಂಟೆಗೆ ಶ್ರೀ ಬಿ.ಡಿ.ಚಂದ್ರೇಗೌಡ, ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯನ್ನು ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಮಾನ್ಯ ಸದಸ್ಯರುಗಳು ಸಭೆಗೆ ಸಕಾಲದಲ್ಲಿ ಹಾಜರಾಗಲು ಕೋರಿದೆ.

(ಎಸ್.ಟಿ.ಅಂಜನ್ ಕುಮಾರ್)
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ, ಹಾಸನ.

ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:

1. ದಿನಾಂಕ: 12-05-2011ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ವಿಚಾರ
2. ದಿನಾಂಕ: 08-06-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
3. ದಿನಾಂಕ: 08-06-2011ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
4. ದಿನಾಂಕ: 10-06-2011ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
5. ದಿನಾಂಕ: 10-06-2011ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
6. ದಿನಾಂಕ: 13-06-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

ಪ್ರತಿಯನ್ನು:

1. ಮಾನ್ಯ ವಸತಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.